[redacted]



# ಒತ್ತಡ ನಿರ್ವಹಣೆ ಸಮರ್ಪಕವಾಗಿ ನಿರ್ವಹಿಸಿ ಸದೃಢ ಆರೋಗ್ಯ ಕಾಯ್ದುಕೊಳ್ಳಿ: ಡಾ.ವೀರೇಂದ್ರ ಕುಮಾರ್



ಬಳ್ಳಾರಿ,ಏ.25–:ಮಾನಸಿಕ ಆರೋಗ್ಯದ ಸದೃಢತೆಗೆ ಜೀವನದ ಪ್ರತಿಯೊಂದು ಕ್ಷಣಗಳನ್ನು ಸಮನಾಗಿ ಸ್ವೀಕರಿಸುವ ಮೂಲಕ ಆರೋಗ್ಯದ ಮೇಲುಂಟಾಗುವ ಸಮಸ್ಯೆಗಳನ್ನು ಸಕಾಲದಲ್ಲಿ ಗುರುತಿಸಿ ಒತ್ತಡ ರಹಿತ ಜೀವನ ನಡೆಸಲು ಪ್ರತಿಯೊಬ್ಬರೂ ಪ್ರಯತ್ನಿಸಬೇಕು ಎಂದು ಜಿಲ್ಲಾ ಮಾನಸಿಕ ಕಾರ್ಯಕ್ರಮ ಅಧಿಕಾರಿ ಡಾ.ವೀರೇಂದ್ರ ಕುಮಾರ್ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ವಿಭಾಗ, ಗುಗ್ಗರಹಟ್ಟಿ ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಇವರ ಆಶ್ರಯದಲ್ಲಿ ಮಾನಸಿಕ ಆರೋಗ್ಯಕ್ಕಾಗಿ ಒತ್ತಡ ನಿರ್ವಹಣೆ ಕುರಿತು ಬಾಲಾಜಿ ಪ್ಲಾಸ್ಟಿಕ್ ಉತ್ಪಾದನಾ ಘಟಕದ ಕಾರ್ಮಿಕರಿಗೆ ಗುರುವಾರ ಹಮ್ಮಿಕೊಂಡಿದ್ದ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಾಮಾನ್ಯವಾಗಿ ಇಂದಿನ ಸಾಮಾಜಿಕ ವ್ಯವಸ್ಥೆಯಲ್ಲಿ ಅತಿಯಾದ ಚಿಂತೆಯು ಸಹಜವಾಗಿದ್ದು, ಕುಟುಂಬದ ನಿರ್ವಹಣೆ ಕೆಲಸ ಹಾಗೂ ಸಹದ್ಯೋಗಿಗಳ ನಮ್ಮೊಂದಿಗಿನ ವರ್ತನೆಗಳು ಒತ್ತಡಕ್ಕೆ ಕಾರಣವಾಗುವ ಸಾಧ್ಯತೆಗಳಿದ್ದು, ಈ ದಿಶೆಯಲ್ಲಿ ಯಾವುದೇ ಕಠಿಣ ಪರಿಸ್ಥಿತಿ ಕಂಡುಬಂದರೂ ಸಹಿತ ಏಕಾಂಗಿಯಾಗಿರದೇ ಒತ್ತಡ ನಿರ್ವಹಿಸಲು ಇತರರ ಜೊತೆ ಮುಕ್ತವಾಗಿ ಮಾತನಾಡಬೇಕು ಎಂದು ಸಲಹೆ ಮಾಡಿದರು.

ಮನೋರೋಗ ತಜ್ಞ ಡಾ.ರೋಹನ್ ವನಗುಂದಿ ಅವರು ಮಾತನಾಡಿ, ಜೀವನದಲ್ಲಿ ಕೌಟುಂಬಿಕ ಹಿನ್ನಲೆ ಅಥವಾ ಬಡವ–ಶ್ರೀಮಂತ ಬೇಧ ಭಾವವಿಲ್ಲದೆ ಎಲ್ಲರಿಗೂ ಕಂಡುಬರಬಹುದು. ಇವುಗಳಿಂದ ಹೊರಬರಲು ದಿನದ ಒಂದು ನಿರ್ದಿಷ್ಟ ಅವಧಿಯಲ್ಲಿ ಕನಿಷ್ಟ ಅರ್ಧ ಗಂಟೆಯಿಂದ ಒಂದು ಗಂಟೆಯವರೆಗೆ ಸಮಯವನ್ನು ಮೀಸಲಿರಿಸಿ, ತಮಗೆ ಇಷ್ಟವಾದ ಸಂಗೀತ, ಕ್ರೀಡೆ, ವ್ಯಾಯಾಮ, ಧ್ಯಾನ, ಯೋಗ ಹಾಗೂ ಇತರೆ ಸಮಾಜ ಸೇವಾ ಕಾರ್ಯಕ್ರಮಗಳಲ್ಲಿ ಭಾಗಿಯಾಗುವ ಮೂಲಕ ಒತ್ತಡದಿಂದ ಹೊರಬರಬಹುದು ಎಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ.ರಮೇಶ್ ಬಾಬು ಅವರ ಮಾರ್ಗದರ್ಶನದಲ್ಲಿ ಜಿಲ್ಲೆಯಲ್ಲಿ ಮಾನಸಿಕ ರೋಗಿಗಳಿಗೆ ಸಕಾಲದಲ್ಲಿ ವೈದ್ಯಕೀಯ ಸೇವೆ ದೊರಕಿಸುವ ರೂಪು–ರೇಷೆಗಳ ಅಡಿ ಒತ್ತಡ ಸಮಸ್ಯೆಗಳಿಂದ ಬಳಲುತ್ತಿರುವವರಿಗೆ ಪ್ರತಿ ಬುಧವಾರ ಜಿಲ್ಲಾ ಮಾನಸಿಕ ಆರೋಗ್ಯ ವಿಭಾಗದಲ್ಲಿ ಮನೋತಜ್ಞರಿಂದ ಆಪ್ತ ಸಮಾಲೋಚನೆಗೆ ಅವಕಾಶ ಮಾಡಲಾಗಿದೆ ಎಂದು ತಿಳಿಸಿದರು.

ಮನೋಚೈತನ್ಯ ಕಾರ್ಯಕ್ರಮದಡಿ 1ನೇ ಮಂಗಳವಾರ ಸಾರ್ವಜನಿಕ ಆಸ್ಪತ್ರೆ ಸಿರುಗುಪ್ಪ, 2ನೇ ಮಂಗಳವಾರ ಸಾರ್ವಜನಿಕ ಆಸ್ಪತ್ರೆ ಸಂಡೂರು, 3ನೇ ಮಂಗಳವಾರ ಸಮುದಾಯ ಆರೋಗ್ಯ ಕೇಂದ್ರ ಕಂಪ್ಲಿ, 4ನೇ ಮಂಗಳವಾರ ಸಮುದಾಯ ಆರೋಗ್ಯ ಕೇಂದ್ರ ಕುರುಗೋಡು ಹಾಗೂ ಪ್ರತಿ ತಿಂಗಳು 16ನೇ ತಾರೀಖು ಸಮುದಾಯ ಆರೋಗ್ಯ ಕೇಂದ್ರ ಮೋಕಗಳಿಗೆ ಮನೋ ವೈದ್ಯರ ತಂಡ ಭೇಟಿ ನೀಡಲಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬಹುದು ಹಾಗೂ ಸರ್ಕಾರದ ಉಚಿತ ಮಾನಸಿಕ ಆರೋಗ್ಯ ಸಹಾಯವಾಣಿ 14416 ಗೆ ಕರೆಮಾಡಿ ಸಲಹೆ ಸೂಚನೆ ಪಡೆದುಕೊಳ್ಳಬಹುದು ಎಂದು ವಿನಂತಿಸಿದರು.

ಈ ಸಂದರ್ಭದಲ್ಲಿ ವಿಮ್ಸ್‌ನ ಡಾ.ಸಹನಾ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಮನೋವೈದ್ಯಕೀಯ ಕಾರ್ಯಕರ್ತ ಶಾಂತಪ್ಪ, ಮನೋಶಾಸ್ತ್ರಜ್ಞ ಶರ್ಮಾಸ್ ವಲಿ.ಪಿ., ಸಮುದಾಯ ಆರೋಗ್ಯ ಶುಶ್ರೂಷಣಾಧಿಕಾರಿ ಶಾಹೀರ ಭಾನು, ಆರೋಗ್ಯ ನಿರೀಕ್ಷಣಾಧಿಕಾರಿ ನಿರಂಜನ್, ಘಟಕದ ವ್ಯವಸ್ಥಾಪಕ ಮೆಹುಲ್, ಶಿವು ಸೇರಿದಂತೆ ಕಾರ್ಮಿಕರು ಇದ್ದರು.

# ಏ.26 ರಿಂದ ಮನೆ ಮನೆಗೆ ತೆರಳಿ ಮತದಾನ ಕಾರ್ಯ

ಗದಗ ಏ–: ಲೋಕಸಭಾ ಚುನಾವಣೆ ಸಂಬಂಧ ಗದಗ ಜಿಲ್ಲೆಯಲ್ಲಿ 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕ ಮತದಾರರು ಹಾಗೂ ವಿಶೇಷಚೇತನ ಮತದಾರರ ಪೈಕಿ 12 ಡಿ ಮುಖಾಂತರ ಅರ್ಜಿ ಸಲ್ಲಿಸಿ ಮನೆಯಲ್ಲಿಯೇ ಮತದಾನ ಮಾಡಲು ಆಯ್ಕೆ ಮಾಡಿದ ಮತದಾರರಿಗೆ ಏಪ್ರಿಲ್ 26 ರಿಂದ 28 ರ ವರೆಗೆ ಮನೆ ಮನೆಗೆ ತೆರಳಿ ಮತದಾನ ಕಾರ್ಯ ಕೈಗೊಳ್ಳಲಿದ್ದಾರೆ. ಆದ್ದರಿಂದ ಈಗಾಗಲೇ ಅರ್ಜಿ ಸಲ್ಲಿಸಿರುವ ಮತದಾರರು ಈ ದಿನಗಳಲ್ಲಿ ತಾವು ನೀಡಿದ ವಿಳಾಸದ ಮನೆಯಲ್ಲಿಯೇ ಹಾಜರಿದ್ದು, ಮತ ಚಲಾಯಿಸುವಂತೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರು ಕೋರಿದ್ದಾರೆ.

# ಲಿಂಗಾಯತ ಮಹಿಳಾ ಸಮಾಜ ದಿಂದ ಅಕ್ಕಮಹಾದೇವಿ ಜಯಂತಿ ಆಚರಣೆ

## ಶಿವಶರಣೆ ಅಕ್ಕಮಹಾದೇವಿ ವಿಚಾರಧಾರೆ, ಚಿಂತನೆ ಸರ್ವಕಾಲಕ್ಕೂ ಪ್ರಸ್ತುತ: ಗುರುಸಿದ್ಧ ಮಹಾಸ್ವಾಮಿಜೀ



ಬೆಳಗಾವಿ: ಶಿವಶರಣೆ ಅಕ್ಕಮಹಾದೇವಿ ಅವರ ವಿಚಾರಧಾರೆ, ಚಿಂತನೆಗಳು ಸರ್ವಕಾಲಕ್ಕೂ ಪ್ರಸ್ತುತವಾಗಿವೆ ಅಕ್ಕನ ವಚನಗಳಲ್ಲಿ ಬದುಕಿನ ಮೌಲ್ಯತೆ ಅಡಗಿವೆ ಎಂದು ಕಾರಂಜಿಮಠ ಶ್ರೀ ಗುರುಸಿದ್ಧ ಮಹಾಸ್ವಾಮಿಗಳು ಹೇಳಿದರು.

ಲಿಂಗಾಯತ ಮಹಿಳಾ ಸಮಾಜದ ದಿಂದ ಲಿಂಗಾಯತ ಭವನದಲ್ಲಿ ಶಿವಶರಣೆ ಅಕ್ಕಮಹಾದೇವಿ ಜಯಂತೋತ್ಸವದಲ್ಲಿ ಅಕ್ಕಮಹಾದೇವಿ ಭಾವಚಿತ್ರಕ್ಕೆ ಪುಷ್ಪಾರ್ಚಣೆ ಸಲ್ಲಿಸಿ ದಿವ್ಯ ಸಾನ್ನಿಧ್ಯ ವಹಿಸಿ ಶ್ರೀಗಳು ಮಾತನಾಡಿದರು. 12 ನೇ ಶತಮಾನದಲ್ಲಿ ಮಹಿಳಾ ಜಾಗ್ರತಿ ಮೂಡಿಸಿ ಸಂಸಾರ ತ್ಯಜಿಸಿದ್ದರು ಚನ್ನಮಲ್ಲಿಕಾರ್ಜುನ ದೇವರೆ ನನ್ನನ್ನು ಪತಿಯೆಂದು ನಂಬಿದರು ತಮ್ಮ ವೈರಾಗ್ಯದ ಮೂಲಕವೆ ಪುರುಷರೊಡನೆ ಸಮಾಜೋದಾರಕ ಕಾರ್ಯದಲ್ಲಿ ಅಕ್ಕ ಮಹಾದೇವಿ ತೊಡಗಿದ್ದರು.

ತಮ್ಮ ಭಾವನೆಗಳನ್ನು ವಚನಗಳ ಮೂಲಕ ತಿಳಿಗನ್ನಡದಲ್ಲಿ ತಿಳಿಸಿ ಲಿಂಗ ಬೇದವಿಲ್ಲದೆ ಜಾತಿ ಬೇದವಿಲ್ಲದೆ ಪ್ರತಿಯೂಬ್ಬರಿಗೂ ಲೋಕ ವಿಚಾರ ಅರಿಯುವಂತೆ ಮಾಡಿದರು ಶಿವಶರಣೆಯಾಗಿ ಅಕ್ಕನವರು ಅಂದಿನ ಸಮಾಜದಲ್ಲಿ ಸ್ತ್ರೀಯರಿಗೆ ಉನ್ನತ ಸ್ಥಾನ ಗಳಿಸಿಕೊಟ್ಟರು ಎಂದು ಹೇಳಿದ್ದರು .ಅಕ್ಕಮಹಾದೇವಿ ಅವರ ಜೀವನ ಮತ್ತು ಸಾಧನೆ ನಮಗೆಲ್ಲ ಮಾದರಿ. ಅಕ್ಕ ಮಹಾತಪಸ್ವಿ, ಅಧ್ಯಾತ್ಮದ ಅರಿವು ಮೂಡಿಸುವ ಜ್ಯೋತಿ ಆಗಿದ್ದರು. ವಚನ ಚಳವಳಿ ಮೂಲಕ ಮಹಿಳಾ ಸಬಲೀಕರಣಕ್ಕೆ ಒತ್ತು ನೀಡಿದ್ದರು ಎಂದು ತಿಳಿಸಿದರು. ಇಡೀ ತಮ್ಮ ಬದುಕನ್ನು ಹೋರಾಟದಲ್ಲಿ ಕೊನೆಗಾಣಿಸಿ ಸಾಹಿತ್ಯ ರಚನೆಗೆ ತನ್ನದೆ ಆದ ಕೊಡುಗೆಯನ್ನು ನೀಡಿದ ಶಿವಶರಣೆ. ಮಹಾಜ್ಞಾನಿ ವೈರಾಗ್ಯನಿಧಿ ಅಲ್ಲಮಪ್ರಭುಗಳಂತವರದಿಂದ ಸನ್ಮಾನಿತಳಾದವಳು ವಚನ ಸಾಹಿತ್ಯಕ್ಕೆ ತನ್ನದೇ ಆದ ಕೊಡುಗೆಗಳನ್ನು ಕೊಟ್ಟು ಕನ್ನಡದ ಪ್ರಥಮ ಕವಿಯತ್ರಿಯಾದವಳು ಶಿವಶರಣೆ ಅಕ್ಕಮಹಾದೇವಿ ಎಂದು ಹೇಳಿದರು.

ಮಾತೋಶ್ರೀ ಗಂಗಾ–ಮಾತಾ , ಶೋಭಾ ಜಾಬಿನ್ ಯವರು ಸಂಗೀತಾ ಕಾರ್ಯಕ್ರಮ ನಡೆಸಿಕೊಟ್ಟರು . ವಿದ್ಯಾ ಹುಂಡೇಕರ್ , ಶೋಭಾ ಜಾಬಿನ್ , ಅಧ್ಯಕ್ಷರು ನೈನಾ ಗಿರಿಗೌಡರ , ಕಾವೇರಿ ಕೀಲಾರಿ ಕಾರ್ಯದರ್ಶಿ ಸೇರಿ ಹಲವಾರ ಲಿಂಗಾಯತ ಮಹಿಳೆಯರು ಇತರರು ಇದ್ದರು.

# ರಾಮತೀರ್ಥ ನಗರದಲ್ಲಿ ಭಕ್ತಿ ಭಾವದೊಂದಿಗೆ ಹನುಮ ಜಯಂತಿ ಆಚರಣೆ



ಬೆಳಗಾವಿ: ಇಲ್ಲಿನ ರಾಮತೀರ್ಥ ನಗರ ರಹವಾಸಿಗಳಿಂದ ಕಣಬರ್ಗಿ ಕೆರೆಯ ಪಕ್ಕದಲ್ಲಿರುವ ಶ್ರೀ ಹನುಮಾನ ಮಂದಿರದಲ್ಲಿ ಶ್ರದ್ಧಾ ಭಕ್ತಿಯಿಂದ ಹನುಮ ಜಯಂತಿಯನ್ನು ಬಹಳ ವಿಜೃಂಭ'ಣೆ'ಯಿಂದ' ಆಚರಿಸಲಾಯಿತು.

ವಿಶೇಷ ಅಲಂಕಾರ, ಪೂಜಾ ಕಾರ್ಯಕ್ರಮಗಳು ನೆರವೇರಿದವು. ಕೆಲವೆಡೆ ಪಾನಕ, ಪ್ರಸಾದ ಹಾಗೂ ಅನ್ನ ಸಂತರ್ಪಣೆ ಏರ್ಪಡಿಸಲಾಗಿತ್ತು. ಮಹಿಳೆ ಯರು ತೊಟ್ಟಿಲೋತ್ಸವ ನಡೆಸಿದರು.

ಸುರೇಶ ಯಾದವ ಫೌಂಡೇಶನ್ ಅಧ್ಯಕ್ಷರಾದ ಸುರೇಶ ಯಾದವ ಮಾತನಾಡಿ. ಹನುಮಂತನು ರಾಮನ ಕಟ್ಟಾ ಭಕ್ತ, ವಿಷ್ಣುವಿನ ಅವತಾರ, ಅವನ ಅಚಲ ಭಕ್ತಿಗೆ ವ್ಯಾಪಾಕವಾಗಿ ಹೆಸರುವಾಸಿಯಾದ ಹನುಮಂತನನ್ನು ವಾಯುದೇವನಾದ ವಾಯುವಿನ ಸ್ವರ್ಗಿಯ ಮಗ ಎಂದು ಕರೆಯುತ್ತಾರೆ.

ಹನುಮಂತನು ಶಕ್ತಿ ಮತ್ತು ಧೈರ್ಯದ ಪ್ರತಿರೂಪ. ಅವನು ಸಮುದ್ರಗಳನ್ನು ದಾಟಬಲ್ಲನು, ಪರ್ವತಗಳನ್ನು ಚಲಿಸಬಲ್ಲನು ಮತ್ತು ಮಾರಣಾಂತಿಕ ರಾಕ್ಷಸರನ್ನು ಸಂಹರಿಸಬಲ್ಲನು. ಅವನ ಶಕ್ತಿ, ಸದಾಚಾರ ಮತ್ತು ಭಕ್ತಿಗಾಗಿ, ಅವನು ಅಮರತ್ವದಿಂದ ಆಶೀರ್ವದಿಸಲ್ಪಟ್ಟನು. ಪುರಾಣಗಳ ಪ್ರಕಾರ, ಶ್ರೀರಾಮನು ತನ್ನ ಭೌತಿಕ ರೂಪವನ್ನು ತೊರೆದಾಗ, ಹನುಮಂತನು ಅವನೊಂದಿಗೆ ಹೋಗಲು ಬಯಸಿದನು. ಆದರೆ ಪ್ರಪಂಚದಲ್ಲಿ ಹನುಮಂತನ ಇರುವಿಕೆ ಎಷ್ಟು ಮುಖ್ಯ ಎಂದು ರಾಮನಿಗೆ ಗೊತ್ತಿತ್ತು. ಹಾಗಾಗಿ, ಆಂಜನೇಯನಿಗೆ ಭೂಮಿಯ ಮೇಲೆ ಶಾಶ್ವತವಾಗಿ ಉಳಿಯಲು ಮತ್ತು ತನ್ನ ಶಕ್ತಿಯಿಂದ ಜನರಿಗೆ ಸಹಾಯ ಮಾಡಲು ರಾಮನು ಆದೇಶಿಸಿದನು. ಅಂದಿನಂದ, ಚಿರಂಜೀವಿ ಹನುಮಂತನು ಭೂಮಿಯ ಮೇಲೆ ನೆಲೆಸಿದ್ದಾನೆ. ಇಲ್ಲಿನ ಹನುಮ ಬೇಡಿದವರಿಗೆ ವರ ಕೊಡುವವನಾಗಿದ್ದಾನೆ ಎಂಬ ನಂಬಿಕೆ ಭಕ್ತರಲ್ಲಿದೆ. ಈ ಹಿನ್ನೆಲೆಯಲ್ಲಿ ಇಲ್ಲಿ ಪ್ರತಿವರ್ಷ ಹನುಮ ಜಯಂತಿಯನ್ನು ಶ್ರದ್ಧೆ, ಭಕ್ತಿಯಿಂದ ಧಾರ್ಮಿಕ ಕಾರ್ಯಗಳ ಮೂಲಕ ವಿಶಿಷ್ಟವಾಗಿ ಆಚರಿಸುತ್ತಿದ್ದೇವೆ. ಶ್ರೀ ಹನುಮಂತನ್ನು ದೇಶದ ಆರಾಧ್ಯ ದೇವ, ಅವರ ಕಾರ್ಯಗಳನ್ನು ಮಕ್ಕಳಿಗೆ ತಿಳಿಸಿ, ಅವರ ಮಾರ್ಗದರ್ಶನ ನಾವೆಲ್ಲರೂ ಸಾಗೋಣ ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಅಪ್ಪಯ್ಯ ಕೊಲ್ಕರ, ಗುರುಪುತ್ರಪ್ಪ ತೋರಗಲ್, ಅರ್ಜುನ ಊರಬೀನಟ್ಟಿ, ಪವಿತ್ರಾ ಪಾಟಿಲ, ಕೆಂಪಣ್ಣ ಜಿನರಾಳ, ಅಭಿಷೇಕ ಅಗಸಗಿ, ಶಿವಲಿಂಗಪ್ಪ ಕಬಾಡಗಿ, ಮಾರುತಿ ಭಾಸ್ಕರ, ರಾಜು ಪಾಟೀಲ ಹಾಗೂ ಸಂತೋಷ ಮೆರೆಕಾರ ಉಪಸ್ಥಿತರಿದ್ದರು. ರಾಮತೀರ್ಥ ನಗರ ಹಾಗೂ ಸುತ್ತಮುತ್ತಲಿನ ರಹವಾಸಿಗಳು ಮಹಾಪ್ರಸಾದ ಸ್ವೀಕರಿಸಿ ಧನ್ಯರಾದರು.ಪವಿತ್ರಾ ಪಾಟಿಲ, ಕೆಂಪಣ್ಣ ಜಿನರಾಳ, ಅಭಿಷೇಕ ಅಗಸಗಿ, ಶಿವಲಿಂಗಪ್ಪ ಕಬಾಡಗಿ, ಮಾರುತಿ ಭಾಸ್ಕರ, ರಾಜು ಪಾಟೀಲ ಹಾಗೂ ಸಂತೋಷ ಮೆರೆಕಾರ ಉಪಸ್ಥಿತರಿದ್ದರು. ರಾಮತೀರ್ಥ ನಗರ ಹಾಗೂ ಸುತ್ತಮುತ್ತಲಿನ ರಹವಾಸಿಗಳು ಮಹಾಪ್ರಸಾದ ಸ್ವೀಕರಿಸಿ ಧನ್ಯರಾದರು.

# "ಅಂಗಾಗ ದಾನ ಜಾಗೃತಿಯ ಕ್ಯು ಆರ್ ಕೋಡ್ ಉದ್ಘಾಟನಾ ಕಾರ್ಯಕ್ರಮ"



ಬೆಳಗಾವಿ: ಅಂಗಾಂಗ ದಾನದ ಮೂಲಕ ಜೀವನ ಸಾರ್ಥಕಗೊಳಿಸಿ ಎಂದು ಕೆ ಎಲ್ ಇ ಡಾ. ಪ್ರಭಾಕರ ಕೋರೆ ಆಸ್ಪತ್ರೆಯ ಪ್ಲಾಸ್ಟಿಕ್ ಸರ್ಜರಿಯ ವಿಭಾಗದ ಮುಖ್ಯಸ್ಥರಾದ ಡಾ. ರಾಜೇಶ ಪವಾರ ಅವರು ಮಾತನಾಡುತ್ತಿದ್ದರು. ಅವರು ಇಂದು ನಗರದ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆ ಹಾಗೂ ರೋಟರಿ ಕ್ಲಬ್ ಆಫ್ ಬೆಳಗಾವಿಯವರ ಸಹಯೋಗದಲ್ಲಿ ನಡೆದ "ಅಂಗಾಗ ದಾನ ಜಾಗೃತಿಯ ಕ್ಯು ಆರ್ ಕೋಡ್ ಉದ್ಘಾಟನಾ ಕಾರ್ಯಕ್ರಮ"ದ ಅಂಗವಾಗಿ ಮಾತನಾಡುತ್ತಿದ್ದರು. ಅಂಗಾಂಗ ದಾನದ ಬಗ್ಗೆ ಸಾರ್ವಜನಕರಲ್ಲಿ ಇರಬಹುದಾದ ಗೊಂದಲಗಳನ್ನು ದೂರಮಾಡುವ ಉದ್ದೇಶದಿಂದ ಈ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಈ ಕ್ಯು ಆರ್ ಕೋಡ್ ಅನ್ನು ಸ್ಕ್ಯಾನ್ ಮಾಡುವ ಮೂಲಕ ಸಾರ್ವಜನಕರಲ್ಲಿರಬಹುದಾದ ಗೊಂದಲಗಳಿಗೆ ಸಮರ್ಪಕವಾದ ಉತ್ತರಗಳನ್ನು ಕಂಡುಕೊಳ್ಳಬಹುದಾಗಿದೆ ಎಂದು ಪ್ರಾತ್ಯಕ್ಷಿಕೆಯ ಮೂಲಕ ತೋರಿಸಿಕೊಟ್ಟರು.

ಕಾರ್ಯಕ್ಷಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡುತ್ತಿದ್ದ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ನಿಯೋಜಿತ ನಿರ್ದೇಶಕರಾದ ಡಾ. ಆರ್ ಜಿ ನೆಲವಿಗಿ ಅವರು ಮಾತನಾಡುತ್ತ ಇಂದು ಪ್ರತಿಯೊಮದು ಸುದ್ದಿ ಮಾಧ್ಯಮದಲ್ಲಿ ಅಂಗಾಂಗ ದಾನದ ಹಿರಿಮೆಯ ಬಗ್ಗೆ ತಿಳಿಸಿಕೊಡುತ್ತಿದ್ದರೂ ಸಹ ಸಾರ್ವಜನಕರು ಇದಕ್ಕೆ ತಕ್ಕೆ ಉತ್ಸಾಹವನ್ನು ತೋರದೇ ಇರುವದು ನಿಜಕ್ಕೂ ಖೇದಕರವೆನ್ನಿಸುತ್ತದೆ. ಇಂದು ರೋಟರಿ ಕ್ಲಬ್ಬ ಆಫ ಬೆಳಗಾಂ ಅವರ ಪ್ರಯತ್ನದಿಂದ ನಮ್ಮ ಕೈಯಲ್ಲೇ ಇರಬಹುದಾದ ಮೊಬೈಲಿಂದ ಅಂಗಾಂಗ ದಾನದ ಬಗ್ಗೆ ತಿಳಿಯಬಹುದಾಗಿದೆ. ಇದರ ಸದುಪಯೋಗ ಪಡೆದು ನೀವು ನೋಂದಾಯಿ ಹಾಗೂ ನಮ್ಮ ಬಳಗದವರಿಂದಲೂ ನೋಂದಣಿ ಮಾಡಿಸಿರಿ ಈ ಮೂಲಕ ಬೇರೊಬ್ಬರ ಜೀವನಕ್ಕೆ ದಾರಿದೀಪವಾಗಿ ಎಂದರು.

ಕಾರ್ಯಕ್ರಮದಲ್ಲಿ ಹಿರಿಯ ಸ್ತ್ರೀರೋಗ ಹಾಗೂ ಪ್ರಸೂತಿ ತಜ್ಞ ಡಾ. ಸತೀಶ ಧಾಮಣಕರ, ಕಿವಿ ಗಂಟಲು ಹಾಗೂ ಮೂಗಿನ ತಜ್ಞ ಡಾ. ಆರ್ ಎನ್ ಪಾಟೀಲ, ಹಿರಿಯ ಸ್ತ್ರೀರೋಗ ಹಾಗೂ ಪ್ರಸೂತಿ ತಜ್ಞ ಡಾ. ಕೆ ಎನ್ ಹೋಳಿಕಟ್ಟಿ ಮತ್ತು ರೋಟರಿ ಕ್ಲಬ್ ಆಫ ಬೆಳಗಾಂ ನ ಪದಾಧಿಕಾರಿ ಶ್ರೀ ವಿಜಯ ಭಾಗವತ ಅವರು ಮತ್ತು ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ವೈದ್ಯಕೀಯ ವೈದ್ಯಕೀಯೇತರ ಸಿಬ್ಬಂದಿ ಭಾಗವಹಿಸಿದ್ದರು. ಕಾರ್ಯಕ್ರಮವನ್ನು ಸಂತೋಷ್ ಇತಾಪೆ ನಿರೂಪಿಸಿ ವಂದಿಸಿದರು. ಡಾ. ಸತೀಶ ಧಾಮಣಕರ ಸ್ವಾಗತಿಸಿದರು.

## ವರನಟ ಡಾ. ರಾಜಕುಮಾರ 95ನೇ ಜಯಂತಿ

# ಡಾ.ರಾಜಕುಮಾರ ಅವರ ಬದುಕು ಎಲ್ಲರಿಗೂ ಆದರ್ಶಪ್ರಾಯ: ಶ್ರೀರಂಗ ಜೋಶಿ




ಬೆಳಗಾವಿ, ಏ.: ವರನಟ ಡಾ. ರಾಜಕುಮಾರ ಅವರು ಕೇವಲ ನಟ ಮಾತ್ರವಲ್ಲ. ಅವರು ಕನ್ನಡದ ಆಸ್ತಿ, ಸರಳ ಸಜ್ಜನಿಕೆಯ ವ್ಯಕ್ತಿ. ತಮ್ಮ ಪಾತ್ರಗಳ ಮೂಲಕ ಸಮಾಜಕ್ಕೆ ಉತ್ತಮ ಸಂದೇಶ ನೀಡಿದವರು. ಡಾ. ರಾಜಕುಮಾರ ಅವರ ಬದುಕು, ವ್ಯಕ್ತಿತ್ವ ಎಲ್ಲರಿಗೂ ಆದರ್ಶಪ್ರಾಯ ಎಂದು ಸಂಗೀತಗಾರ ಡಾ. ಶ್ರೀರಂಗ ಜೋಶಿ ಅವರು ತಿಳಿಸಿದರು. ನಗರದ ವಾರ್ತಾ ಭವನದಲ್ಲಿ ಬುಧವಾರ (ಏ.24) ನಡೆದ ವರನಟ ಡಾ. ರಾಜಕುಮಾರ 95ನೇ ಜಯಂತಿ ಆಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕನ್ನಡದ ಕಂಪನ್ನು ರಾಳ್ಳಮಟ್ಟದಲ್ಲಿ ಬೆಳಗಿಸಿದ ನಟ ಡಾ.ರಾಜಕುಮಾರ್. ಕನ್ನಡ ಭಾಳೆ, ನೆಲ, ಜಲ, ಜನ ಎಲ್ಲರಿಗೂ ಸದಾಕಾಲ ಬೆಳಕಾಗಿರುವ ಡಾ.ರಾಜಕುಮಾರ್ ಅವರ ಜೀವನವನ್ನು ಸ್ಮರಿಸೋಣ ಎಂದು ಹೇಳಿದರು.

ರಾಜಕುಮಾರ್ ಅವರು ತಮ್ಮ ತಂದೆಯವರೊಂದಿಗೆ ಗುಬ್ಬಿ ವೀರಣ್ಣ ನೇತೃತ್ವದ ತಂಡದಲ್ಲಿ ರಂಗಭೂಮಿ ಕಲಾವಿದರಾಗಿ ತಮ್ಮ ವೃತ್ತಿಜೀವನವನ್ನು ಪ್ರಾರಂಭಿಸಿದರು. ಇಲ್ಲಿಯೇ ರಾಜ್‌ಕುಮಾರ್ ತಮ್ಮ ನಟನೆ ಮತ್ತು ಗಾಯನ ಕೌಶಲ್ಯವನ್ನು ಪ್ರಾರಂಭಿಸಿದರು.

ಬೇಡರ ಕಣ್ಣಪ್ಪ ಚಿತ್ರದ ಮೂಲಕ ಮುತ್ತು ರಾಜು ಚಿತ್ರರಂಗ ಪ್ರವೇಶಿಸಿ. ತದನಂತರ ರಾಜ್‌ಕುಮಾರ್ ಆಗಿ ತಮ್ಮ ಜೀವನದುದ್ದಕ್ಕೂ ಮನೆ ಮನ ಮಾತಾದರು.

ಭಾರತೀಯ ಚಿತ್ರರಂಗದ ಬಹುಮುಖ ನಟರಾಗಿ ಅವರು ಹಾಸ್ಯ, ಸಾಹಸ, ಪ್ರೇಮ ಕಥೆ, ದ್ವಿ/ತ್ರಿಪಾತ್ರ, ಪೌರಾಣಿಕ ಪಾತ್ರಗಳಿಂದ ಆಧುನಿಕ ದಿನದ ಸಾಮಾಜಿಕ ಸಮಸ್ಯೆಗಳ ಮೇಲೆ ಬೆಳಕು ಚೆಲ್ಲಿದ್ದಾರೆ ಎಂದು ಶ್ರೀರಂಗ ಜೋಶಿ ಅವರು ಹೇಳಿದರು.

ಸಿಟಿಇ ಕಾಲೇಜು ಉಪನ್ಯಾಸಕಿ ಝುಡ್.ಜಿ ಸಯ್ಯದ್, ಸಣ್ಣ ಉಳಿತಾಯ ಖಾತೆ ಸಹಾಯಕ ನಿರ್ದೇಶಕ ವಿ.ಎಂ ಕಂಗ್ರಾಳಕರ್, ಶಿಕ್ಷಣ ಇಲಾಖೆ ವಿಳಯು ಪರಿವಿಕ್ಷಕರಾದ ಎಂ.ಎಂ ಪಾಟೀಲ, ಮುಖ್ಯೋಪಾಧ್ಯಾಯ ಎಸ್.ಎಸ್.ಘೋರ್ಪಡೆ, ದೈಹಿಕ ಶಿಕ್ಷಕರಾದ ಎಂ.ಪಿ ನಚ್ಚಣಕಿ, ಶಿಕ್ಷಕ ಎ. ಬಿ ಕಾಮಣ್ಣವರ, ಅಧೀಕ್ಷಕರಾದ ಎಂ. ಬಿ ಉಫಾಡೆ, ದ್ವಿತೀಯ ದರ್ಜೆ ಸಹಾಯಕ ಗಜಾನನ ಹಳೆಮನಿ ಮತ್ತು ಮಹಾಬಮಳೇಶ್ವರ ಸಾಬಣ್ಣವರ, ವಾರ್ತಾ ಇಲಾಖೆ ಪ್ರಶಿಕ್ಷಣಾರ್ಥಿಗಳಾದ ನೀಲಾ ಹೊಸಮನಿ, ಸಿದ್ದೇಶ್ವರ ದಾಸಪ್ಪಗೋಳ, ಸಂತೋಳ್ ಕಾಂಬಳೆ ಉಪಸ್ಥಿತರಿದ್ದರು. ವಾರ್ತಾ ಇಲಾಖೆ ಸಿಬ್ಬಂದಿ ಅನಂತ ಪಪ್ಪು, ಅವರು ಸ್ವಾಗತ ಕೋರಿದರು.

# ಕುರುಗೋಡು ಪಟ್ಟಣದಲ್ಲಿ ಪಂಜಿನ ಮೆರವಣಿಗೆ ಮೂಲಕ ಮತದಾನ ಜಾಗೃತಿ



ಬಳ್ಳಾರಿ,ಏ.25:ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ಮತ್ತು ಕುರುಗೋಡು ತಾಲ್ಲೂಕು ಆಡಳಿತ, ತಾಲ್ಲೂಕು ಸ್ವೀಪ್ ಸಮಿತಿ ಹಾಗೂ ಪುರಸಭೆ ಇವರ ಸಂಯುಕ್ತಾಶ್ರಯದಲ್ಲಿ ಲೋಕಸಭೆ ಸಾರ್ವತ್ರಿಕ ಚುನಾವಣೆ ಅಂಗವಾಗಿ ಕುರುಗೋಡು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಬುಧವಾರ ಸಂಜೆ ಪಂಜಿನ ಮೆರವಣಿಗೆ ನಡೆಸಿ ಜನರಲ್ಲಿ ಮತದಾನ ಜಾಗೃತಿ ಮೂಡಿಸಲಾಯಿತು.

ತಾಲ್ಲೂಕು ಸ್ವೀಪ್ ನೋಡೆಲ್ ಅಧಿಕಾರಿ ಹಾಗೂ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕೆ.ವಿ.ನಿರ್ಮಲಾ ಅವರು ಜಾಥಾಗೆ ಚಾಲನೆ ನೀಡಿ ಮಾತನಾಡಿ, ಮೇ 07 ರಂದು ನಡೆಯುವ ಲೋಕಸಭೆ ಸಾರ್ವತ್ರಿಕ ಚುನಾವಣೆಯಲ್ಲಿ ತಾಲ್ಲೂಕಿನಲ್ಲಿ ಅತಿ ಹೆಚ್ಚು ಮತದಾನ ಮಾಡಿ ಜಿಲ್ಲೆಗೆ ಮಾದರಿಯಾಗಬೇಕು ಎಂಬ ಉದ್ದೇಶದಿಂದ ಮತದಾರರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಪ್ರಜ್ಞಾವಂತ ಮತದಾರರು ತಪ್ಪದೆ ಮತದಾನ ಮಾಡಿ ಎಂದು ಸಲಹೆ ನೀಡಿದರು.

ಹಣಕ್ಕೆ ಮತ ಮಾರಿಕೊಳ್ಳಬೇಡಿ, ಅಭಿವೃದ್ಧಿ ಬಗ್ಗೆ ಕಾಳಜಿ ಇರುವ ಅರ್ಹರಿಗೆ ಮತ ನೀಡಿ, ಮತದಾನ ನಮ್ಮ ಹಕ್ಕು ಎನ್ನುವ ಘೋಷಣೆಗಳನ್ನು ಕೂಗಿದರು. *ಮೆಹಂದಿಯಲ್ಲಿ ಅರಳಿದ ಮತದಾನ ಜಾಗೃತಿ: ಕುರುಗೋಡು ತಾಲ್ಲೂಕಿನ ದಮ್ಮೂರು ಗ್ರಾಮ ಪಂಚಾಯತ್ ವ್ಯಾಪ್ತಿಯ ಶ್ರೀ ಸದ್ಗುರು ಶ್ರೀ ವೆಂಕಾವಧೂತರ ದೇವಸ್ಥಾನದ ಆವರಣದಲ್ಲಿ ಮತದಾನ ಜಾಗೃತಿ ಅಂಗವಾಗಿ ವಿನೂತನವಾಗಿ ಮೆಹಂದಿ ಕಾರ್ಯಕ್ರಮ ನಡೆಯಿತು.

ಸ್ವ–ಸಹಾಯ ಸಂಘದ ಮಹಿಳೆಯರಿಗೆ ಮೆಹಂದಿ ಬರೆಯುವ ಮೂಲಕ ಮೇ 07 ರಂದು ತಪ್ಪದೇ ಮತದಾನ ಮಾಡುವಂತೆ ಜಾಗೃತಿ ಮೂಡಿಸಲಾಯಿತು. ಈ ಸಂದರ್ಭದಲ್ಲಿ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಸಹಾಯಕ ನಿರ್ದೇಶಕ ಶಿವರಾಮ ರೆಡ್ಡಿ, ಪಂಚಾಯತ್ ರಾಜ್ ಇಲಾಖೆಯ ಸಹಾಯಕ ನಿರ್ದೇಶಕ ಅನೀಲ್ ಕುಮಾರ್, ತಾಲ್ಲೂಕು ಯೋಜನಾಧಿಕಾರಿ ರಾಧಿಕಾ, ಪುರಸಭೆ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು, ತಾಲ್ಲೂಕು ಪಂಚಾಯತ್ ಸಿಬ್ಬಂದಿ ವರ್ಗದವರು, ಸ್ವ–ಸಹಾಯ ಸಂಘದ ಮಹಿಳೆಯರು ಮತ್ತು ಆಶಾ–ಕಾರ್ಯಕರ್ತೆಯರು ಭಾಗವಹಿಸಿದ್ದರು.

# ಪರೀಕ್ಷಾ ಕೇಂದ್ರಗಳ ಸುತ್ತಲೂ ಪ್ರತಿಬಂಧಕಾಜ್ಞೆ ಜಾರಿ

ಗದಗ ಏಪ್ರಿಲ್ 25 : ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯು 2024 ರ ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ಜರುಗುವ ದ್ವಿತೀಯ ಪಿಯುಸಿ ಪರೀಕ್ಷೆ –2 ಪರೀಕ್ಷೆಗಳನ್ನು ಏಪ್ರಿಲ್ 29 ರಿಂದ ಮೇ 16 ರವರೆಗೆ ಬೆಳಿಗ್ಗೆ 10.15 ಗಂಟೆಯಿಂದ ಸಂಜೆ 5.30 ರವರೆಗೆ ನಡೆಸಲಿದೆ.

ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಜಿಲ್ಲೆಯ 8 ಪರೀಕ್ಷಾ ಕೇಂದ್ರಗಳಲ್ಲಿ ಏಪ್ರಿಲ್ 29 ರಿಂದ ಮೇ 16 ರವರೆಗೆ ಬೆ. 9.00 ಗಂಟೆಯಿಂದ ಮಧ್ಯಾಹ್ನ 2.30 ಗಂಟೆಯವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.

ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯ ನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು, ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ.

ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝೆರಾಕ್ಸ್ ಅಂಗಡಿ, ಬುಕ್ ಸ್ಟಾಲ್, ಫೋಟೋ ಕಾಪಿಯರ್‌ಗಳನ್ನು ಬಂದ ಮಾಡಲು ಆದೇಶಿಸಿದೆ. ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಫೋನ್ ಮತ್ತು ಇತರೇ ಸಂಪರ್ಕ ಸಲಕರಣೆಗಳನ್ನು ತರುವುದನ್ನು ನಿಷೇಧಿಸಲಾಗಿದೆ.

ಪರೀಕ್ಷಾ ದಿನಗಳಂದು ಪರೀಕ್ಷಾ ಕೇಂದ್ರಗಳಿಗೆ ವಿದ್ಯಾರ್ಥಿಗಳು ಆಗಮಿಸುವ ಸಮಯ ಮತ್ತು ಹೊರ ಹೋಗುವ ಸಮಯದಲ್ಲಿ ಮಾತ್ರ ಚಿತ್ರೀಕರಿಸಲು ಮಾಧ್ಯಮದವರಿಗೆ ಅವಕಾಶವಿದ್ದು, ಪರೀಕ್ಷಾ ಗೌಪ್ಯತೆ ದೃಷ್ಟಿಯಿಂದ ಪರೀಕ್ಷಾ ಕೊಠಡಿಗಳಲ್ಲಿ ಪ್ರವೇಶ, ಚಿತ್ರೀಕರಣ ಇತ್ಯಾದಿಗಳನ್ನು ಸಂಪೂರ್ಣವಾಗಿ ನಿಷೇಧಿಸಿದೆ. ಎಂದು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿ ವೈಶಾಲಿ ಎಂ.ಎಲ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪರೀಕ್ಷಾ ಕೇಂದ್ರಗಳ ವಿವರ ಇಂತಿದೆ: ನಗರದ ಜ.ತೋಂಟದಾರ್ಯ ಪದವಿ ಪೂರ್ವ ಕಾಲೇಜು, ಹೆಚ್.ಸಿ.ಇ.ಎಸ್. ಪದವಿ ಪೂರ್ವ ಕಾಲೇಜು, ಶಿರಹಟ್ಟಿಯ ಸರ್ಕಾರಿ ಪದವಿ ಪೂರ್ವ ಕಾಲೇಜು, ನರಗುಂದದ ಸರ್ಕಾರಿ ಪದವಿ ಪೂರ್ವ ಕಾಲೇಜು, ಮುಂಡರಗಿಯ ಜೆ.ಎ. ಪದವಿ ಪೂರ್ವ ಕಾಲೇಜು, ರೋಣದ ವೀರರಾಣಿ ಚೆನ್ನಮ್ಮ ಪದವಿ ಪೂರ್ವ ಕಾಲೇಜು, ಲಕ್ಷ್ಮೇಶ್ವರ ಸರ್ಕಾರಿ ಪದವಿ ಪೂರ್ವ ಕಾಲೇಜು, ಗಜೇಂದ್ರಗಡ ಸರ್ಕಾರಿ ಪದವಿ ಪೂರ್ವ ಕಾಲೇಜು.

GADI KANNADIGA,kannada daily, printed, published , edited, & woned by murugesh b.shivapuji ,printed ,plot no:12,sy no:174/3b,press colony,kuvempu nagar, post:hindalaga-591108,Tq & Dt:belgaum, And published at plot no:12,sy no:174/3b,press colony,kuvempu nagar,post:hindalaga-591108,Tq & Dt:belgaum, karnataka, RNI NO:KAR KAN/2003/10452. Permission to post at Belagavi, Kacheri post office Belagavi. No:PMG/KA/NK/BM/743/24-26